ಶ್ರೀ ಎನ್.ಎಲ್. ನರೇಂದ್ರಬಾಬು : ಮಾನ್ಯ ಅಧ್ಯಕ್ಷರೆ, ಈಗ ಪರ್ಯಾಲೋಚಿಸುವಂಥ ವಿಧೇಯಕಗಳ ಪ್ರತಿಗಳನ್ನು ನಮಗೆ ಕಳುಹಿಸಿಕೊಡಿ.

ಶ್ರೀ ಜಿ.ವಿ. ಶ್ರೀರಾಮರೆಡ್ಡಿ : ಮಾನ್ಯ ಅಧ್ಯಕ್ಷರೆ, ಈ ರೀತಿಯಾದರೆ ಈ ಸದನಕ್ಕೆ ಖಂಡಿತ ಗೌರವ ಬರುವುದಿಲ್ಲ. ಈ ರೀತಿ ಸದನ ನಡೆಯುವುದಾದರೆ ಸದನದ ವ್ಯವಸ್ಥೆಗೆ ಗೌರವ ಸಿಗುವುದಿಲ್ಲ. ನಮಗೆ ಯಾರು ವಿಧೇಯಕದ ಪ್ರತಿಯನ್ನು ಕೊಟ್ಟಿದಾರೆ ಎಂಬುದನ್ನು ನೀವೇ ಕೇಳಿ? ಈ ವಿಧಾನಸಭೆಗೆ ಮಾನ ಮರ್ಯಾದೆ, ಗೌರವ ಬೇಡವೇ? ಅವರು ಕೊಡುವುದಕ್ಕೆ ಆಗದೇ ಇದ್ದರೂ ತಾವಾದರೂ ಹೇಳಬೇಕಲ್ಲವೆ? ಕನಿಷ್ಟಪಕ್ಷ ನಮ್ಮಲ್ಲಿರತಕ್ಕಂಥ ಪ್ರೊಸೀಜರ್‌ನ್ನು ಫಾಲೋ ಮಾಡುವುದಾದರು ಬೇಡವೆ?

ಶ್ರೀ ಜಿ.ಸಿ. ಮಾಧುಸ್ವಾಮಿ : ಈ ರೀತಿಯ ನಡವಳಿಕೆಯಿಂದ ಈ ಶಾಸನಸಭೆಗೆ ನಿಜವಾಗಿಯೂ ಕೂಡ ಅವಮಾನವಾಗುತ್ತದೆ.

ಶ್ರೀ ಜಿ.ವಿ. ಶ್ರೀರಾಮರೆಡ್ಡಿ : ಮಾನ್ಯ ಅಧ್ಯಕ್ಷರೆ, ಇದೇನು ಶಾಸನಸಭೆಯೋ ಅಥವಾ ಗ್ರಾಮಪಂಚಾಯತಿ ಸಭೆಯೋ? ಇವತ್ತಿನದಿವಸ ಪಂಚಾಯತಿ ಸಭೆಗಳು ಈ ರೀತಿಯಾಗಿ ನಡೆಯುವುದಿಲ್ಲ.

ಅಧ್ಯಕ್ಷರು : ಇದೆಲ್ಲಾ ಬಜೆಟ್ ಮೇಲಿನ ಬಿಲ್ಸ್. ಆದ್ದರಿಂದ, ಇವೆಲ್ಲವನ್ನೂ ಒಂದೇ ಸಾರಿ ತೆಗೆದುಕೊಳ್ಳಲಾಗಿದೆ.

ಆ) ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1) ಕರ್ನಾಟಕ ಧನ ವಿನಿಯೋಗ (ಸಂಖ್ಯೆ 1) ವಿಧೇಯಕ, 2004.

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು): ಮಾನ್ಯ ಅಧ್ಯಕ್ಷರೆ, "2004ನೇ ಸಾಲಿನ ಕರ್ನಾಟಕ ಧನ ವಿನಿಯೋಗ (ಸಂಖ್ಯೆ 1) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ."

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2004ನೇ ಸಾಲಿನ ಕರ್ನಾಟಕ ಧನ ವಿನಿಯೋಗ (ಸಂಖ್ಯೆ 1) ವಿಧೇಯಕವನ್ನು ಪರ್ಯಾಲೋಚಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ರಿಂದ 3 ರವರೆಗೆ, ಎರಡೂ ಸೇರಿದಂತೆ,

ಪ್ರಸ್ತಾವ ಏನೆಂದರೆ:–

ಅಧ್ಯಕ್ಷರು : "ಖಂಡ 2 ರಿಂದ 3 ರವರೆಗೆ, ಎರಡೂ ಸೇರಿದಂತೆ, ಈ ವಿಧೇಯಕದ ಅಂಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ರಿಂದ 3 ರವರೆಗೆ, ಎರಡೂ ಸೇರಿದಂತೆ, ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು).

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು) : ಮಾನ್ಯ ಅಧ್ಯಕ್ಷರೆ, "2004ನೇ ಸಾಲಿನ ಕರ್ನಾಟಕ ಧನ ವಿನಿಯೋಗ (ಸಂಖ್ಯೆ 1) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2004ನೇ ಸಾಲಿನ ಕರ್ನಾಟಕ ಧನ ವಿನಿಯೋಗ (ಸಂಖ್ಯೆ 1) ವಿಧೇಯಕವನ್ನು ಅಂಗೀಕರಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತ್ತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

2) ಕರ್ನಾಟಕ ತೆರಿಗೆ ಕಾನೂನುಗಳ (ಎರಡನೇ ತಿದ್ದುಪಡಿ) ವಿಧೇಯಕ, 2004.

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು): ಮಾನ್ಯ ಅಧ್ಯಕ್ಷರೆ, "2004ನೇ ಸಾಲಿನ ಕರ್ನಾಟಕ ತೆರಿಗೆ ಕಾನೂನುಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ."

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2004ನೇ ಸಾಲಿನ ಕರ್ನಾಟಕ ತೆರಿಗೆ ಕಾನೂನುಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ರಿಂದ 8 ರವರೆಗೆ, ಎರಡೂ ಸೇರಿದಂತೆ,

ಪ್ರಸ್ತಾವ ಏನೆಂದರೆ:–

ಅಧ್ಯಕ್ಷರು : "ಖಂಡ 2 ರಿಂದ 3 ರವರೆಗೆ, ಎರಡೂ ಸೇರಿದಂತೆ, ಈ ವಿಧೇಯಕದ ಅಂಗವಾಗಿರುತ್ತದೆ."

ಪ್ರಸಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ರಿಂದ 3 ರವರೆಗೆ, ಎರಡೂ ಸೇರಿದಂತೆ, ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು).

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,